# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎ.ಆಂಜನೇಯ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ. ವಿಭಾಗ, ರಾಯಚೂರು ಇವರ ವಿರುದ್ಧ ಕೈಗೊಂಡ ಇಲಾಖಾ ವಿಚಾರಣೆಯನ್ನು ಕೈಬಿಡುವ ಬಗ್ಗೆ - ಆದೇಶ

ಓದಲಾಗಿದೆ:-

1. ಮುಖ್ಯ ಇಂಜಿನಿಯರ್, ಪಂ.ರಾ.ಇಂ. ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಮುಇಂ/ಪಂರಾಇಂಇ/ಬೆಂ/ಆ.ಶಾಖೆ/ಸಿ-10/ಇಎನ್‌ಕ್ಯೂ/06/2020-21; ದಿನಾಂಕ:18.03.2020 ಮತ್ತು 22.09.2020
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 55 ಜಿಪಅ 2020, ದಿನಾಂಕ:31.03.2020
3. ಕಾರಣ ಕೇಳುವ ನೋಟಿಸ್‌ನೊಂದಿಗೆ ಆಪಾದಿತರಿಗೆ ಜಾರಿಗೊಳಿಸಲಾದ ಆರೋಪ ಪಟ್ಟಿ ಸಂಖ್ಯೆ: ಗ್ರಾಅಪ 46 ಇಎನ್‌ಕ್ಯೂ 2020, ದಿ:15.01.2021

****

ಪ್ರಸ್ತಾವನೆ:-

ಶ್ರೀ ಎ.ಆಂಜನೇಯ, ಹಿಂದಿನ ಕಾರ್ಯಪಾಲಕ ಇಂಜಿನಿಯರ್,. ರಾಯಚೂರು ಇವರು ತಮ್ಮ ಕರ್ತವ್ಯ ಅವಧಿಯಲ್ಲಿ ಒಟ್ಟು 7 ಕಾಮಗಾರಿಗಳ ತಾಂತ್ರಿಕ ಮೌಲ್ಯಮಾಪನ ಪರಿಶೀಲನೆಗೆ ಸಂಬಂಧಿಸಿದಂತೆ, ಗುತ್ತಿಗೆದಾರರು ಬಿಡ್ ಮಾಡಿದ ದಾಖಲೆಗಳನ್ನು ನಿರ್ಲಕ್ಷತೆ, ದುರುದ್ದೇಶ ಮತ್ತು ಸ್ವ-ಹಿತಾಸಕ್ತಿಯಿಂದ ಗುತ್ತಿಗೆ ದಾಖಲೆಗಳನ್ನು ನಿಯಮಾನುಸಾರ ಪರಿಶೀಲಿಸದೆ ಅರ್ಹ ಗುತ್ತಿಗೆದಾರರನ್ನು ಅನರ್ಹ ಎಂದೂ ಹಾಗೂ ಅರ್ಹತೆ ಇಲ್ಲದ ಗುತ್ತಿಗೆದಾರರನ್ನು ಅರ್ಹ ಎಂದು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಕೇಂದ್ರ ಕಛೇರಿಗೆ ಸಲ್ಲಿಸಿರುವ ಬಗ್ಗೆ ಹಾಗೂ ಟೆಂಡರ್‌ಗಳ ತಾಂತ್ರಿಕ ಬಿಡ್ ಪರಿಶೀಲನಾ ಸಭೆಯಲ್ಲಿ ಅಧೀಕ್ಷಕ ಅಭಿಯಂತರರು ನೀಡಿದ ನಿರ್ದೇಶನಗಳನ್ನು ಪಾಲಿಸದೆ ಯಥಾವತ್ತಾಗಿ ತಾಂತ್ರಿಕ ಬಿಡ್ ಅನ್ನು ಅನುಮೋದನೆಗೆ ಸಲ್ಲಿಸಿರುತ್ತಾರೆಂಬ ಆರೋಪದಡಿ ಸದರಿಯವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವ ಸಂಬಂಧ ಮೇಲೆ ಓದಲಾದ ಕ್ರ.ಸಂ.(1)ರಲ್ಲಿ ಮುಖ್ಯ ಇಂಜಿನಿಯರ್, ಪಂ.ರಾ.ಇಂ. ಇಲಾಖೆ ಇವರು, ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮುಖ್ಯ ಇಂಜಿನಿಯರ್, ಪಂ.ರಾ.ಇಂ. ಇಲಾಖೆ ಇವರು, ಸರ್ಕಾರಕ್ಕೆ ಸಲ್ಲಿಸಿದ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಿ 2018-19ನೇ ಸಾಲಿನ ವಿವಿಧ ಅನುಮೋದಿತ ಕಾಮಗಾರಿಗಳ ಟೆಂಡರ್‌ಗಳಲ್ಲಿ ದಾಖಲೆಗಳ ಪರಿಶೀಲನೆ ನಡೆಸದೆ ಗುತ್ತಿಗೆದಾರರ ತಾಂತ್ರಿಕ ಬಿಡ್‌ಗಳನ್ನು ಅನರ್ಹಗೊಳಿಸಲು ನಿಯಮಬಾಹಿರವಾಗಿ ಶಿಫಾರಸ್ಸು ಮಾಡಿ ಕಾಮಗಾರಿಗಳ ಅನುಷ್ಠಾನದಲ್ಲಿ ವಿಳಂಬವಾಗಲು ಕಾರಣರಾಗಿ ಕರ್ತವ್ಯಲೋಪವೆಸಗಿರುವುದು ಕಂಡುಬಂದ ಹಿನ್ನಲೆಯಲ್ಲಿ ಶ್ರೀ ಎ.ಆಂಜನೇಯ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ. ವಿಭಾಗ, ರಾಯಚೂರು ಇವರನ್ನು ಮೇಲೆ ಓದಲಾದ ಕ್ರ.ಸಂ.(2)ರಲ್ಲಿ ಅಮಾನತ್ತುಗೊಳಿಸಲಾಗಿತ್ತು. ತಮ್ಮ ವಿರುದ್ಧದ ಅಮಾನತ್ತನ್ನು ತೆರವುಗೊಳಿಸಿ ಕೆಲಸ ನಿರ್ವಹಿಸಲು ಅವಕಾಶ ನೀಡಬೇಕೆಂದು ಕೋರಿದ ಮೇರೆಗೆ ಸದರಿಯವರ ಮನವಿಯನ್ನು ಪರಿಗಣಿಸಿ, ಸದರಿಯವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ,ಇಲಾಖಾ ವಿಚಾರಣೆ ನಡೆಸಲು ಕೈಗೊಳ್ಳಬಹುದಾದ ಕ್ರಮಗಳನ್ನು ಬಾಕಿ ಇರಿಸಿ, ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 79 ಜಿಪಅ 2020, ದಿನಾಂಕ:27.04.2020 ರಲ್ಲಿ ಇವರ ಅಮಾನತ್ತನ್ನು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸಿ ಪಂ.ರಾ.ಇಂ. ವಿಭಾಗ, ವಿಜಯಪುರ ಇಲ್ಲಿಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಲಾಗಿರುತ್ತದೆ.

ಶ್ರೀ ಎ.ಆಂಜನೇಯ, ಕಾರ್ಯಪಾಲಕ ಇಂಜಿನಿಯರ್, ಇವರು ಈ ಹಿಂದೆ ಪಂ.ರಾ.ಇಂ, ವಿಭಾಗ ರಾಯಚೂರು ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿರುವ ಕರ್ತವ್ಯ ಲೋಪಕ್ಕೆ ಸಂಬಂಧಿಸಿದಂತೆ ಸದರಿಯವರ ವಿರುದ್ಧ ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ ನಿಯಮ-11ರಡಿ ಇಲಾಖಾ ವಿಚಾರಣೆ ನಡೆಸಲು ನಿರ್ಣಯಿಸಿ ಮೇಲೆ ಓದಲಾದ ಕ್ರ.ಸಂ.(3)ರಲ್ಲಿ ಆಪಾದಿತರಿಗೆ ದೋಷಾರೋಪಣಾ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿರುತ್ತದೆ. ಸದರಿ ನೋಟೀಸಿಗೆ ಪ್ರತಿಯಾಗಿ ಆಪಾದಿತರು ಯಾವುದೇ ಲಿಖಿತ ಹೇಳಿಕೆಯನ್ನು ಸಲ್ಲಿಸಿರುವುದಿಲ್ಲ.

ಶ್ರೀ ಎ.ಆಂಜನೇಯ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ. ವಿಭಾಗ, ರಾಯಚೂರು (ಹಾಲಿ ನಿವೃತ್ತ) ಇವರು ಮೂಲತಃ ಲೋಕೋಪಯೋಗಿ ಇಲಾಖೆಯ ಸೇವೆಗೆ ಸೇರಿದವರಾಗಿದ್ದು, ನಿಯೋಜನೆ ಮೇಲೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಸದರಿಯವರು ಈ ಹಿಂದೆ ಕಾರ್ಯಪಾಲಕ ಇಂಜಿನಿಯರ್ ಆಗಿ ಪಂ.ರಾ.ಇಂ.ವಿಭಾಗ ರಾಯಚೂರಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಕರ್ತವ್ಯ ಲೋಪವೆಸಗಿರುತ್ತಾರೆ. ಆದರೆ ಸದರಿ ಅಧಿಕಾರಿಯ ವಿರುದ್ಧದ ಆರೋಪದಲ್ಲಿ ಯಾವುದೇ ಆರ್ಥಿಕ ನಷ್ಟದ ಪ್ರಸ್ತಾವನೆ ಇಲ್ಲದಿರುವುದಿಲ್ಲ ಹಾಗೂ ಇವರು ಈಗಾಗಲೇ ಸೇವೆಯಿಂದ ವಯೋನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧ ಕೈಗೊಂಡ ಇಲಾಖಾ ವಿಚಾರಣೆಯನ್ನು ಈ ಹಂತಕ್ಕೆ ಮುಕ್ತಾಯಗೊಳಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 46 ಇಎನ್‌ಕ್ಯೂ 2020, ಬೆಂಗಳೂರು, ದಿನಾಂಕ:18.01.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಶ್ರೀ ಎ.ಆಂಜನೇಯ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ,. ವಿಭಾಗ, ರಾಯಚೂರು (ಹಾಲಿ ನಿವೃತ್ತ), ಇವರು ಈ ಹಿಂದೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿರುವ ಕರ್ತವ್ಯಲೋಪಕ್ಕೆ ಸಂಬಂಧಿಸಿದಂತೆ ಸದರಿಯವರ ವಿರುದ್ಧ ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ ನಿಯಮ-11 ರಡಿ ಕೈಗೊಳ್ಳಲಾದ ಇಲಾಖಾ ವಿಚಾರಣೆಯನ್ನು ಈ ಹಂತಕ್ಕೆ ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಕೆ. ನದೀಮ್ 18/1/22

**(ಕೆ. ನದೀಮ್ ಅಹ್ಮದ್)**
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
18/1/22

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 &2) / (ಆಡಿಟ್).
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದ), ಕೆ.ಆರ್. ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು/ವಿಜಯಪುರ.
6. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ರಾಯಚೂರು/ವಿಜಯಪುರ.
7. ಸಂಬಂಧಪಟ್ಟ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಮುಖಾಂತರ).

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಜಂಟಿ ಕಾರ್ಯದರ್ಶಿಗಳು(ಆಡಳಿತ-1),ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಶಾಖೆ.
4. ಶಾಖಾ ರಕ್ಷಾ ಕಡತ / ವೆಬ್‌ಸೈಟ್ ನಲ್ಲಿ ಪ್ರಕಟಿಸಲು.